# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

---

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.21/ಪಿಆರ್: 33 :2022-23 ದಿನಾಂಕ: 01.10.2022

## ದಾಸರಹಳ್ಳಿ ವಾರ್ಡ್-21ರ ವಾರ್ಡ್ ಸಭೆಯ ನಡವಳಿ

ದಿ.01.10.2022 ರಂದು ಮಧ್ಯಾಹ್ನ 12.30 ಗಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಶ್ರೀ.ಎಸ್.ಡಿ.ವೆಂಕಟೇಶ್, ವಾರ್ಡ್ ಕಮಿಟಿ ನೋಡೆಲ್ ಆಫೀಸರ್ ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು. ಇಂದಿನ ಸಭೆಯಲ್ಲಿ ನಡೆದ ವಾರ್ಡ್ ಸಮಿತಿ ನಡವಳಿಗಳು ಈ ಕೆಳಕಂಡಂತಿದೆ.

**ಹಾಜರಿದ್ದವರು:**

1. ಶ್ರೀ.ವಿಶ್ವನಾಥ್, ಮುಖ್ಯ ಅಭಿಯಂತರರು, ದಾಸರಹಳ್ಳಿ ವಲಯ, ಬಿಬಿಎಂಪಿ
2. ಶ್ರೀ.ರಂಗನಾಥ್ ಬಿ.ಆರ್, ಸಹಾಯಕ ಕಾರ್ಯಪಾಲಕ ಅಭಿಯಂತರರು, ಟಿ.ದಾ.ಉ.ವಿ
3. ಶ್ರೀ.ಎನ್.ಡಿ.ವೆಂಕಟೇಶ್, ಸಹಾಯಕ ಕಾರ್ಯಪಾಲಕ ಅಭಿಯಂತರರು, ವಾರ್ಡ್ ಕಮಿಟಿ ನೋಡೆಲ್ ಆಫೀಸರ್, ದಾಸರಹಳ್ಳಿ ವಾರ್ಡ್ ನಂ.21
4. ಶ್ರೀ.ವೆಂಕಟೇಶಪ್ಪ, ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ದಾಸರಹಳ್ಳಿ ವಾರ್ಡ್ ನಂ.21
5. ಶ್ರೀಮತಿ.ಚೈತ್ರ ಎಂ, ಕಿರಿಯ ಆರೋಗ್ಯ ಪರಿವೀಕ್ಷಕರು, ದಾಸರಹಳ್ಳಿ ವಾರ್ಡ್ ನಂ.21
6. ಶ್ರೀ.ಗಣೇಶ್, ಬೀದಿ ದೀಪಗಳ ನಿರ್ವಹಣೆ, ಬಿಬಿಎಂಪಿ
7. ಶ್ರೀ.ಶಾಂತಕುಮಾರ್, ಎಸ್.ಡಬ್ಲ್ಯೂ.ಎಂ ಮೇಲ್ವಿಚಾರಕರು
8. ಶ್ರೀ.ಶ್ರೀನಿವಾಸ್, ಎಸ್.ಡಬ್ಲ್ಯೂ.ಎಂ ಮೇಲ್ವಿಚಾರಕರು
9. ಶ್ರೀಮತಿ.ಶ್ಯಾಮಲಾ, ಲಿಂಕ್ ವರ್ಕರ್, ದಾಸರಹಳ್ಳಿ
10. ಶ್ರೀ.ಎಂ.ಮುನಿರಾಜು, ವಾರ್ಡ್ ಸಮಿತಿ ಸದಸ್ಯರು, ದಾಸರಹಳ್ಳಿ
11. ಶ್ರೀ.ರಾಮಮೂರ್ತಿ, ವಾರ್ಡ್ ಸಮಿತಿ ಸದಸ್ಯರು, ದಾಸರಹಳ್ಳಿ
12. ಶ್ರೀ.ಮಹಾದೇವ್ ಎಂ. ಬಿಬಿಎಂಪಿ ಮಾರ್ಷಲ್

ನೋಡೆಲ್ ಅಧಿಕಾರಿಗಳು ವಾರ್ಡ್ ನಂ.21, ದಾಸರಹಳ್ಳಿ ರವರು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು ಹಾಗೂ ಹಾಜರಿದ್ದ ಅಧಿಕಾರಿಗಳನ್ನು ಸ್ವಾಗತಿಸಿ ಮಾತನಾಡುತ್ತಾ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಸಾರ್ವಜನಿಕರ ನಡುವೆ ಸಮನ್ವಯ ಸಾಧಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪ್ರತೀ ವಾರ್ಡ್‌ಗೆ ನೋಡೆಲ್ ಅಧಿಕಾರಿಗಳನ್ನು ನೇಮಿಸಿ, ಸಾರ್ವಜನಿಕ ಕುಂದುಕೊರತೆ ನಿವಾರಣಾ ಸಂಬಂಧ ಪ್ರತೀ ತಿಂಗಳ ಮೊದಲ ಮತ್ತು ಮೂರನೇ ಶನಿವಾರ ಸಭೆ ಸೇರಿ ವಾರ್ಡ್‌ನ ಕುಂದುಕೊರತೆಗಳ ಬಗ್ಗೆ ಚರ್ಚಿಸಿ, ಅಗತ್ಯ ಕ್ರಮವಹಿಸಲು ಸೂಚಿಸಿರುವುದಾಗಿ ತಿಳಿಸಿದರು.

Scanned with CamScanner

## 1. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ.

- ಘನತ್ಯಾಜ್ಯ ನಿರ್ವಹಣೆಯ ಸಂಬಂಧ ವಾರ್ಡ್‌ನಲ್ಲಿ 19 ಆಟೋಗಳು, ಒಣ ಕಸ ಸಂಗ್ರಹಣಾ ಆಟೋ-03, ಹಾಗೂ 02 ಕಾಂಪ್ಯಾಕ್ಟರ್ ವಾಹನಗಳು ಘನತ್ಯಾಜ್ಯ ವಿಲೇವಾರಿಗಾಗಿ ನಿಯೋಜಿಸಲಾಗಿರುತ್ತದೆಂದು ವಾರ್ಡ್ ಸಮಿತಿ ಸಭೆಯಲ್ಲಿ ಕಿರಿಯ ಆರೋಗ್ಯ ಪರಿವೀಕ್ಷಕರು ರವರು ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿ ನಿತ್ಯ ಮನೆ ಮನೆಗಳಿಂದ ಕಸ ಸಂಗ್ರಹಿಸುವ ಆಟೋಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿರುವುದಾಗಿ, ವಾರ್ಡ್ ಸಮಿತಿ ಸದಸ್ಯರು ಸಭೆಯಲ್ಲಿ ತಿಳಿಸಿದರು.
- ಪೌರಕಾರ್ಮಿಕರು ಬ್ಲಾಕ್‌ಸ್ಪಾಟ್‌ಗಳಲ್ಲಿ ಕಸವನ್ನು ಸರಿಯಾಗಿ ವಿಲೇವಾರಿ ಮಾಡುತ್ತಿರುವುದಿಲ್ಲವೆಂದು ವಾರ್ಡ್ ಸಮಿತಿ ಸದಸ್ಯರು ದೂರಿದರು. ಸದರಿ ದೂರಿನನ್ವಯ ತುರ್ತು ಕ್ರಮವಹಿಸಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

## 2.ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.

- ದಾಸರಹಳ್ಳಿ ವಾರ್ಡ್ ನಂ.21ರ ಎಸ್.ರಮೇಶ್ ರಸ್ತೆ ಮತ್ತು ಆಫೀಸರ್ಸ್ ಮಾಡೆಲ್ ಕಾಲೋನಿ ರಸ್ತೆಗಳಲ್ಲಿ ಡಾಂಬರೀಕರಣ ಕಾಮಗಾರಿ ಮುಕ್ತಾಯಗೊಂಡಿರುತ್ತದೆ ಎಂದು ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿದರು.

## 3. ಬೆಸ್ಕಾಂಗೆ ಸಂಬಂಧಿಸಿದ ಬಗ್ಗೆ.

- ದಾಸರಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿ ಬೆಸ್ಕಾಂ ಇಲಾಖೆಯವರು ರಸ್ತೆಗಳನ್ನು ಅಗೆದು ಕೇಬಲ್‌ಗಳನ್ನು ಅಳವಡಿಸುವ ಕಾಮಗಾರಿಯನ್ನು ನಿರ್ವಹಿಸಲು ಸಾರ್ವಜನಿಕ ರಸ್ತೆಗಳನ್ನು ಅಗೆದು ಹಾಳುಮಾಡುತ್ತಿರುವುದರಿಂದ ವಾಹನ ಸಂಚಾರಕ್ಕೆ ಹಾಗೂ ಸಾರ್ವಜನಿಕ ಓಡಾಟಕ್ಕೆ ತೊಂದರೆ ಉಂಟಾಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಸದರಿ ವಿಷಯಗಳ ಬಗ್ಗೆ ತುರ್ತು ಕ್ರಮವಹಿಸಲು ಸಂಬಂಧಪಟ್ಟ ಇಲಾಖೆಯವರಿಗೆ ಸೂಚಿಸಲಾಯಿತು.

## 4. ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಗೆ ಸಂಬಂಧಿಸಿದ ಬಗ್ಗೆ.

- ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ಒಳಚರಂಡಿ ಹಾಗೂ ಕುಡಿಯುವ ನೀರಿನ ಸಂಪರ್ಕಕ್ಕಾಗಿ ಕಾವೇರಿ ನೀರಿನ ಸರಬರಾಜು ವ್ಯವಸ್ಥೆಯನ್ನು ಅಳವಡಿಸಲು ರಸ್ತೆಗಳನ್ನು ಅಗೆಯುತ್ತಿರುವುದರಿಂದ ವಾಹನ ಸವಾರರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವ ಬಗ್ಗೆ ವಾರ್ಡ್ ಸಮಿತಿ ಸದಸ್ಯರು ಸಭೆಯಲ್ಲಿ ತಿಳಿಸಿದರು.
- ದಾಸರಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿ ಮಳೆ ನೀರನ್ನು ಸ್ಯಾನಿಟರಿ ಪೈಪ್‌ಗೆ ಬಿಡದೆ ರಸ್ತೆಬದಿಯಲ್ಲಿರುವ ಚರಂಡಿಗಳಿಗೆ ಬಿಡಬೇಕೆಂದು ಈಗಾಗಲೇ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ನೋಟೀಸ್ ನೀಡಲಾಗಿದ್ದು, ಅದರಂತೆ ಎಲ್ಲರೂ ಸಹಕರಿಸಲು ಕೋರಿದರು.

ಸದರಿ ವಿಷಯಗಳ ಬಗ್ಗೆ ತುರ್ತು ಕ್ರಮವಹಿಸಲು ಸಂಬಂಧಪಟ್ಟ ಇಲಾಖೆಯವರಿಗೆ ಸೂಚಿಸಲಾಯಿತು.

Scanned with CamScanner

ಪುಟ-03.

**5. ಇತರೆ ವಿಷಯಗಳ ಬಗ್ಗೆ:**

- 60 ವಯಸ್ಸಿನ ಮೇಲ್ಪಟ್ಟವರಿಗೆ ಬೂಸ್ಟರ್ ಡೋಸ್ ಲಸಿಕೆಯನ್ನು ನೀಡಲಾಗುತ್ತಿದ್ದು, ಶೇ.100% ವ್ಯಾಕ್ಸಿನ್ ಪೂರ್ಣಗೊಂಡಿರುವುದಾಗಿ ಆರೋಗ್ಯ ಇಲಾಖೆಯವರು ವಾರ್ಡ್ ಸಮಿತಿ ಸಭೆಯಲ್ಲಿ ತಿಳಿಸಿದರು.
- ಆಧಾರ್ ಕಾರ್ಡ್‌ಗಳನ್ನು ಗುರುತಿನ ಚೀಟಿಗೆ ಲಿಂಕ್ ಮಾಡುವ ಬಗ್ಗೆ ಮನೆಮನೆಗೆ ಹೋಗಿ ಪ್ರಚಾರ ಮಾಡಿ, ಕಾರ್ಯ ಪ್ರವೃತ್ತರಾಗಬೇಕೆಂದು ಸರ್ವಾನುಮತದಿಂದ ತೀರ್ಮಾನಿಸಿ, ಅದರಂತೆ ತುರ್ತು ಕ್ರಮವಹಿಸಲು ಕಂದಾಯ ಇಲಾಖೆಗೆ ಸೂಚಿಸಲಾಯಿತು.
- ಕಲ್ಯಾಣ ಇಲಾಖೆಯಲ್ಲಿ ಒಂಟಿ ಮನೆ ಯೋಜನೆ ಅಡಿಯಲ್ಲಿ ಉಚಿತ ಮನೆಗಳನ್ನು ನಿರ್ಮಿಸಲು ಹೊಸದಾಗಿ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಸಲ್ಲಿಸಲು ದಿ.19.10.2022 ರವರೆಗೆ ಮುಂದುವರೆಸಿರುವುದಾಗಿ ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿದರು.
- ವಾರ್ಡ್ ವ್ಯಾಪ್ತಿಯ ಪೈಪ್‌ಲೈನ್ ರಸ್ತೆ, ಕಾಳಹಸ್ತಿ ನಗರದ ಮುಖ್ಯರಸ್ತೆಗಳಲ್ಲಿ ಬೀದಿ ದೀಪಗಳ ಸಮರ್ಪಕ ನಿರ್ವಹಣೆ ಆಗದೇ ಇರುವ ಬಗ್ಗೆ ವಾರ್ಡ್ ಸದಸ್ಯರು ಸೂಚಿಸಿದ್ದು, ಅದರಂತೆ ಸಂಬಂಧಿಸಿದ ಗುತ್ತಿಗೆದಾರರಿಗೆ ಸಮರ್ಪಕವಾಗಿ ಬೀದಿ ದೀಪಗಳ ನಿರ್ವಹಣೆ ಮಾಡಲು ಸೂಚಿಸಲಾಯಿತು.
- ಸಾರ್ವಜನಿಕರು ರಾತ್ರಿಯ ವೇಳೆಯಲ್ಲಿ ಕಸವನ್ನು ಎಲ್ಲೆಂದರಲ್ಲಿ ಹಾಕುತ್ತಿರುವುದರಿಂದ ವಾರ್ಡ್‌ನ ಸ್ವಚ್ಛತೆ ಹಾಳಾಗುತ್ತಿರುತ್ತದೆ ಆದುದರಿಂದ ರಾತ್ರಿ ವೇಳೆಯಲ್ಲಿ ಮಾರ್ಷಲ್‌ಗಳು ವಾರ್ಡ್ ವ್ಯಾಪ್ತಿಯಲ್ಲಿ ಗಸ್ತು ತಿರುಗಿ, ಕಸಹಾಕುವವರಿಗೆ ದಂಡ ವಿಧಿಸುವ ಬಗ್ಗೆ ಕ್ರಮಕೈಗೊಳ್ಳುವಂತೆ ವಾರ್ಡ್ ಸದಸ್ಯರು ಸಭೆಯಲ್ಲಿ ಕೋರಿದರು.
- ಕಳಪೆ ಗುಣಮಟ್ಟದ ಪ್ಲಾಸ್ಟಿಕ್ ಬಳಕೆ ನಿಷೇಧಿಸಿದ್ದರೂ ಸಹ ಅಂಗಡಿಗಳಲ್ಲಿ ಹಾಗೂ ಬೀದಿಬದಿ ವ್ಯಾಪಾರಿಗಳು ಹಾಗೂ ಸಾರ್ವಜನಿಕರು ಪ್ಲಾಸ್ಟಿಕ್ ಬಳಸುತ್ತಿರುವುದು ಕಂಡುಬಂದಿರುತ್ತದೆ ಈ ಬಗ್ಗೆ ಬಿಬಿಎಂಪಿ ಮಾರ್ಷಲ್‌ಗಳು ಪರಿಶೀಲಿಸಿ, ಸಾರ್ವಜನಿಕರುಗಳಿಗೂ ದಂಡ ವಿಧಿಸುವ ಬಗ್ಗೆ ಕ್ರಮವಹಿಸಲು ಮುಖ್ಯ ಅಭಿಯಂತರರು (ದಾ.ವ) ರವರು ಸಭೆಯಲ್ಲಿ ತಿಳಿಸಿದರು.

ಅಂತಿಮವಾಗಿ ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸ್ಪಂದಿಸಿ ಬಗೆಹರಿಸಲು, ಕ್ರಮ ತೆಗೆದುಕೊಂಡ ಬಗ್ಗೆ ಎಲ್ಲಾ ಇಲಾಖೆಗಳ ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಹಾಗೂ ಮುಂದಿನ ಸಭೆಗೆ ಎಲ್ಲಾ ಇಲಾಖೆಯಿಂದ ಅಧಿಕಾರಿಗಳು ಸಭೆಗೆ ಹಾಜರಾಗಿ ಸಾಧಿಸಬೇಕಾದ ಗುರಿ ಹಾಗೂ ಸಾಧನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ವಾರ್ಡ್ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| **ಸದಸ್ಯ ಕಾರ್ಯದರ್ಶಿ** | **ನೋಡಲ್ ಅಧಿಕಾರಿ ಹಾಗೂ** |
| **ಹಾಗೂ ಸಹಾಯಕ ಅಭಿಯಂತರರು** | **ವಾರ್ಡ್ ಸಮಿತಿ ಅಧ್ಯಕ್ಷರು** |
| **ವಾರ್ಡ್ ನಂ. 21, ದಾಸರಹಳ್ಳಿ** | **ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರು** |
| **ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** | **ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** |

<u>ಅಧಿಕಾರಿಗಳ ಮಾಹಿತಿಗಾಗಿ</u>

1) ಸನ್ಮಾನ್ಯ ಶ್ರೀ.ಆರ್.ಮಂಜುನಾಥ್ ರವರು, ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನ ಸಭಾ ಕ್ಷೇತ್ರ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2) ಮಾನ್ಯ ವಿಶೇಷ ಆಯುಕ್ತರು, ಬಿಬಿಎಂಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
3) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
4) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
5) ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
6) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
7) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
8) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಸಲ್ಲಿಸಿದೆ.
11) ಕಛೇರಿ ಪ್ರತಿ.

Scanned with CamScanner